5. 2014–15 ನೇ ಸಾಲಿನ ಅನುದಾನ ಬೇಡಿಕೆಗಳ ಮಂಡನೆ

ಬೇಡಿಕೆ ಸಂಖ್ಯೆ: 12 – ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31 ನೇ ಮಾರ್ಚ್ 2015ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 33,841.35 ಲಕ್ಷ ರೂ.ಗಳ ಮತ್ತು ಬಂಡವಾಳ ಖಾತೆಯಲ್ಲಿ 29,459.77 ಲಕ್ಷ ರೂ. ಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 17 – ಶಿಕ್ಷಣ

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) (ಶಿಕ್ಷಣ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31ನೇ ಮಾರ್ಚ್ 2015ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಶಿಕ್ಷಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 20,62,827.04 ಲಕ್ಷ ರೂ.ಗಳು ಮತ್ತು ಬಂಡವಾಳ ಖಾತೆಯಲ್ಲಿ 67,635.48 ಲಕ್ಷ ರೂ.ಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು:– ಈಗ ಸಭೆಯನ್ನು ಮಧ್ಯಾಹ್ನ 3–00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸಭೆಯು ಮಧ್ಯಾಹ್ನ 2 ಗಂಟೆ 14 ನಿಮಿಷಕ್ಕೆ ಮುಕ್ತಾಯಗೊಂಡು ಭೋಜನದ ನಂತರ ಪುನಃ 3–00 ಗಂಟೆಗೆ ಸೇರಲು ನಿಶ್ಚಯಿಸಿತು)

(ಸದನವು ಮಧ್ಯಾಹ್ನ 3 ಗಂಟೆ 10 ನಿಮಿಷಕ್ಕೆ ಪ್ರಾರಂಭಗೊಂಡಾಗ ಸನ್ಮಾನ್ಯ ಅಧ್ಯಕ್ಷರು ಪೀಠವನ್ನಲಂಕರಿಸಿದ್ದರು)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ:– ಮಾನ್ಯ ಅಧ್ಯಕ್ಷರೆ, ಬೆಳಿಗ್ಗೆ ನಾವು ವಿದ್ಯಾರ್ಥಿನಿಯಾದ ಯುವತಿಯ ಮೇಲೆ ನಡೆದ ಅತ್ಯಾಚಾರ ಪ್ರಕರಣದ ಬಗ್ಗೆ ಪ್ರಸ್ತಾಪಿಸಿದ್ದೆವು. ಗೃಹ ಸಚಿವರಿಂದ ಉತ್ತರ ಕೊಡಿಸಬೇಕಾಗಿತ್ತು. ಈಗಲಾದರೂ ಗೃಹ ಸಚಿವರು ಉತ್ತರ ಶುರು ಮಾಡುತ್ತಾರಾ ಎನ್ನುವುದು ನಮ್ಮ ಪ್ರಶ್ನೆ.

(ಗೊಂದಲ)

ಶ್ರೀ ಕೆ.ಜಿ. ಬೋಪಯ್ಯ:– ಅದು ಅವರ ಕ್ಷೇತ್ರದಲ್ಲಿಯೇ ಆಗಿರುವುದು.

(ಗೊಂದಲ)

ಅಧ್ಯಕ್ಷರು:– ಆಯಿತು ಅವರನ್ನು ಬರುವುದಕ್ಕೆ ಹೇಳುತ್ತೇನೆ.

(ಗೊಂದಲ)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ:– ಇದು ತುಂಬಾ ಗಂಭೀರವಾದ ವಿಚಾರ. ಇಲ್ಲಿ ಅಷ್ಟೇ ಅಲ್ಲ, ಗುಲ್ಬರ್ಗ, ಕೋಲಾರದಲ್ಲಿ ಈ ರೀತಿಯ ಘಟನೆಗಳಾಗಿದೆ. ಪ್ರಕರಣಗಳ ಸಂಖ್ಯೆ ...

(ಗೊಂದಲ)

ಅಧ್ಯಕ್ಷರು:– ಸರ್ಕಾರ ಉತ್ತರ ಕೊಡಬೇಕಲ್ಲಾ.

(ಗೊಂದಲ)